ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2015–16ನೇ ಸಾಲಿನ ನಗರೋತ್ಥಾನ ಯೋಜನೆಯಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ, ಬ್ಯಾಟರಾಯನಪುರ ವಿಭಾಗದ ವ್ಯಾಪ್ತಿಯಲ್ಲಿ ಕೈಗೊಳ್ಳುವ "Improvements to Roads & Drains, Construction of RO Water Plant Bangaluru One Centre in Ward No. 7 & 8 Byatarayanapura Division (Package-2) (Indent No. 26618) (21 works) ರ ಕಾಮಗಾರಿಗಳಿಗೆ ಆಡಳಿತಾತ್ಮಕ ಹಾಗೂ ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 449 ಎಸ್‌ಎಫ್‌ಸಿ 2015, ದಿನಾಂಕ: 24–11–2015.
2. ಸರ್ಕಾರದ ಆದೇಶ ಸಂಖ್ಯೆ: ನಅಇ 217 ಎಸ್‌ಎಫ್‌ಸಿ 2016, ದಿನಾಂಕ: 28–05–2016.
3. ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ–1), ದಿನಾಂಕ: 21–06–2016.
4. ಆಯುಕ್ತರು, ಬಿ.ಬಿ.ಎಂ.ಪಿ. ಪತ್ರ ಸಂಖ್ಯೆ: ಪ್ರ.ಅ/ಪಿಆರ್/6612/2017–18, ದಿನಾಂಕ: 17–10–2017
5. ದಿನಾಂಕ: 07–11–2017 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 24–11–2015ರ ಆದೇಶದಲ್ಲಿ, 2015–16ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಘೋಷಿಸಿರುವ ರೂ.1000.00 ಕೋಟಿಗಳ ಅನುದಾನದ ಪೈಕಿ ರೂ.997.26 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳುವ ಒಟ್ಟು 1156 ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ ಅನುಮೋದನೆ ನೀಡಲಾಗಿರುತ್ತದೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ: 28–05–2016ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರ ಪ್ರಸ್ತಾವನೆಯನ್ವಯ ಸರ್ಕಾರದ ಆದೇಶ ಸಂಖ್ಯೆ: ನಅಇ 449 ಎಸ್‌ಎಫ್‌ಸಿ 2015, ದಿನಾಂಕ: 24–11–2015 ರನ್ವಯ ಅನುಮೋದನೆಯಾಗಿರುವ ಕಾಮಗಾರಿಗಳಿಗೆ ಬದಲಾಗಿ ಅಷ್ಟೇ ಮೊತ್ತದಲ್ಲಿ ಕೈಗೆತ್ತಿಕೊಳ್ಳುವ ಪರಿಷ್ಕೃತ ಕಾಮಗಾರಿಗಳಿಗೆ ಅನುಮೋದನೆಯನ್ನು ನೀಡಲಾಗಿರುತ್ತದೆ.

3. ಮೇಲೆ (3) ರಲ್ಲಿ ಓದಲಾದ ದಿನಾಂಕ: 21–06–2016ರ ಆದೇಶದಲ್ಲಿ ನಗರೋತ್ಥಾನ ಯೋಜನೆ, ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಮತ್ತು ಸರೋವರ ಅಭಿವೃದ್ಧಿ ಯೋಜನೆಯಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2016–17 ಮತ್ತು 2017–18ನೇ ಸಾಲಿನಲ್ಲಿ ಒಟ್ಟು ರೂ.700 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ

ಅನುಮೋದನೆಯನ್ನು ನೀಡಲಾಗಿದ್ದು, ಅನುಬಂಧ-II (Spillover works)ರ ಕ್ರಮ ಸಂಖ್ಯೆ: 02 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ರಸ್ತೆ, ಪಾದಚಾರಿ ಮಾರ್ಗ ಚರಂಡಿ ಹಾಗೂ ಇತರೆ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ರೂ.797.26 ಕೋಟಿಗಳ ಅನುದಾನವನ್ನು ಮುಂದುವರೆಸಿ ನಿಗಧಿಪಡಿಸಲಾಗಿರುತ್ತದೆ.

4. ಮೇಲೆ (4) ರಲ್ಲಿ ಓದಲಾದ ದಿನಾಂಕ: 17-10-2016ರ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪತ್ರದಲ್ಲಿ, 2015-16ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಘೋಷಿಸಿರುವ ರೂ.1000.00 ಕೋಟಿಗಳ ಅನುದಾನದ ಪೈಕಿ ರೂ.997.26 ಕೋಟಿಗಳ ಅಂದಾಜು ಮೆಚ್ಚಪಲ್ಲಿ ಕೈಗೊಳ್ಳುವ ಒಟ್ಟು 1156 ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ ಅನುಮೋದನೆ ನೀಡಲಾಗಿದ್ದು, ನಂತರ ಸರ್ಕಾರದ ಆದೇಶ ಸಂಖ್ಯೆ: ನಅಇ 217 ಎಸ್ಎಫ್ಸಿ 2016, ದಿನಾಂಕ: 28-05-2016 ರಲ್ಲಿ ನೀಡಿರುವ ಬದಲಿ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದ್ದು, ಬ್ಯಾಟರಾಯನಪುರ ವಿಭಾಗದ ವ್ಯಾಪ್ತಿಯಲ್ಲಿ ಕೈಗೊಳ್ಳುವ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಲೆಕ್ಕ ಶೀರ್ಷಿಕೆ: P3106 Nagarothana Works ಅಡಿಯಲ್ಲಿ ರೂ.740.00 ಲಕ್ಷಗಳು ಮಂಜೂರಾಗಿರುತ್ತದೆ. ಅದರಂತೆ, ಬ್ಯಾಟರಾಯನಪುರ ವಿಭಾಗದ ಕಚೇರಿಯಿಂದ ದಿನಾಂಕ: 24-08-2017 ರಂದು ದ್ವಿಲಕೋಟೆ ಇ-ಪ್ರಕ್ಯೂರ್ಮೆಂಟ್ ಪದ್ಧತಿಯಂತೆ ರೂ.6,58,18,582.62/- ಲಕ್ಷಗಳಿಗೆ ಟೆಂಡರ್ ಆಹ್ವಾನಿಸಲಾಗಿರುತ್ತದೆ. ಸದರಿ ಪ್ಯಾಕೇಜ್-2ರ ಕಾಮಗಾರಿಗಳ ತಾಂತ್ರಿಕ ಬಿಡ್ನ್ನು ದಿನಾಂಕ: 28-08-2017 ರಂದು ತೆರೆಯಲಾಗಿದ್ದು, ಸದರಿ ಟೆಂಡರ್ನಲ್ಲಿ 07 ಜನ ಬಿಡ್ದಾರರು ಭಾಗವಹಿಸಿರುತ್ತಾರೆ. ಅವರಲ್ಲಿ ಬಿಡ್ದಾರರಾದ Sri. D. Narahari (Benaka Developers & Projects Pvt Ltd formerly known as Prajval Properties Pvt Ltd) ರವರು ತಾಂತ್ರಿಕವಾಗಿ ಅರ್ಹತೆ ಹೊಂದಿರುವುದರಿಂದ ಸದರಿಯವರ ತಾಂತ್ರಿಕ ಬಿಡ್ನ್ನು ಅಂಗೀಕರಿಸಿ ಆರ್ಥಿಕ ಬಿಡ್ನ್ನು ತೆರೆಯಲು ಆಯುಕ್ತರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ. ಸದರಿ ಸಭೆಯ ನಿರ್ಣಯದಂತೆ ತಾಂತ್ರಿಕವಾಗಿ ಅರ್ಹರಾದ ಗುತ್ತಿಗೆದಾರರ ಆರ್ಥಿಕ ಬಿಡ್ನ್ನು ದಿನಾಂಕ: 10-10-2017 ರಂದು ತೆರೆಯಲಾಗಿದ್ದು, ವಿವರಗಳು ಈ ಕೆಳಕಂಡಂತೆ ಇರುತ್ತವೆ.

ಕ್ರ ಸಂ.	ತಾಂತ್ರಿಕ ಮೌಲ್ಯ ಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)	ಟೆಂಡರ್ಗಿಟ್ಟ ಮೊತ್ತ (ರೂ.ಗಳಲ್ಲಿ)	ಟೆಂಡರ್ನಲ್ಲಿ ನಮೂದಿಸಿರುವ ಮೊತ್ತ (ರೂ.ಗಳಲ್ಲಿ)	ಅನುಮೋದಿತ ಎಸ್.ಆರ್. ದರಗಳಿಗೆ ಹೋಲಿಸಿದಾಗ
1.	Sri. D. Narahari (Benaka Developers & Projects Pvt Ltd formerly known as Prajval Properties Pvt Ltd)	740.00	6,58,18,825.62	6,97,91,247.97	+6.03% ರಷ್ಟು ಹೆಚ್ಚು

5. ಮೇಲ್ಕಂಡ ಕಾಮಗಾರಿಗೆ ಗುತ್ತಿಗೆದಾರರಾದ Sri. D. Narahari (Benaka Developers & Projects Pvt Ltd formerly known as Prajval Properties Pvt Ltd) ರವರು ನಮೂದಿಸಿರುವ ಟೆಂಡರ್ ಮೊತ್ತ ರೂ.6,97,91,247.97/-. ಗಳನ್ನು ನಮೂದಿಸಿದ್ದು, ಅನುಮೋದಿತ ದರಗಳಿಗೆ ಹೋಲಿಸಿದಾಗ ಶೇಕಡಾ 6.03% ರಷ್ಟು

ಪೆಚ್ಚು ಇದ್ದು, ಸದರಿ ಪ್ಯಾಕೇಜ್-2ರ ಕಾಮಗಾರಿಗಳ ಅಂದಾಜುಪಟ್ಟಿ ರೂ.740.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಗುತ್ತಿಗೆದಾರರು ನಮೂದಿಸಿರುವ ಟೆಂಡರ್ ಮೊತ್ತ ರೂ.6,97,91,247.97/- ಗಳ ಟೆಂಡರ್‌ಗೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

6. ಮೇಲೆ (5) ರಲ್ಲಿ ಓದಲಾದ ದಿನಾಂಕ: 07-11-2017 ರಂದು ನಡೆದ ಅಧಿಕಾರಯುಕ್ತ ಸಮಿತಿಯ ಸಭೆಯಲ್ಲಿ ವಿಷಯವನ್ನು ಚರ್ಚಿಸಿ ನಿರ್ಣಯಿಸಿದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 640 ಎಂಎನ್‌ವೈ 2017,
ಬೆಂಗಳೂರು, ದಿನಾಂಕ: 11-12-2017.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2015-16ನೇ ಸಾಲಿನ ನಗರೋತ್ಥಾನ ಯೋಜನೆಯಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ, ಬ್ಯಾಟರಾಯನಪುರ ವಿಭಾಗದ ವ್ಯಾಪ್ತಿಯಲ್ಲಿ ಕೈಗೊಳ್ಳುವ "Improvements to Roads & Drains, Construction of RO Water Plant Bangaluru One Centre in Ward No. 7 & 8 Byatarayanapura Division (Package-2) (Indent No. 26618) (21 works) ರ ಕಾಮಗಾರಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 217 ಎಸ್‌ಎಫ್‌ಸಿ 2016, ದಿನಾಂಕ: 28-05-2016 ರಲ್ಲಿ ಅನುಮೋದನೆ ನೀಡಿರುವ ಬದಲಿ ಕಾಮಗಾರಿಗಳ ಅಂದಾಜು ಮೊತ್ತ ರೂ.7.40 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅಧಿಕಾರಯುಕ್ತ ಸಮಿತಿಯು ಗುತ್ತಿಗೆದಾರರಾದ Sri. D. Narahari (Benaka Developers & Projects Pvt Ltd formerly known as Prajval Properties Pvt Ltd) ರವರು ನಮೂದಿಸಿರುವ ಅಂತಿಮ ಮೊತ್ತ ರೂ.6.910 ಕೋಟಿಗಳು, 2016-17ನೇ ಸಾಲಿನ ದರಗಳಿಗೆ ಹೋಲಿಸಿದಾಗ ಶೇಕಡಾ 5% ರಷ್ಟು ಹೆಚ್ಚಿನ ದರಗಳಿಗೆ ಮಿತಿಗೊಳಿಸಿ, ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಟೆಂಡರ್‌ಗೆ ಸರ್ಕಾರದ ಅನುಮೋದನೆ ನೀಡಿದೆ.

1. ಮೇಲಿನ ಕಾಮಗಾರಿಯನ್ನು ಕೆ.ಟಿ.ಪಿ.ಪಿ. ಕಾಯ್ದೆ/ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.
2. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ-1), ದಿನಾಂಕ: 21-06-2016 ರಲ್ಲಿ 2016-17ನೇ ಸಾಲಿನಲ್ಲಿ ಮೀಸಲಿಟ್ಟ ನಗರೋತ್ಥಾನ ಯೋಜನೆಯ ಅನುದಾನದಿಂದ ಭರಿಸುವುದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಮೊತ್ತವನ್ನು ಪಾಲಿಕೆಯು ತನ್ನ ಸ್ವಂತ ನಿಧಿಯಿಂದಲೇ ಭರಿಸತಕ್ಕದ್ದು.
3. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.
4. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದೆಂದು ತಿಳಿಸಿದೆ.

5. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

6. ದಿನಾಂಕ: 07-11-2017ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ವಿಕೇಶ್ ಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ 3 ಮತ್ತು 9) ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
12. ಅಧೀಕ್ಷಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
13. ಕಾವಲು ಕಡತ/ಪೆಟ್ಟುವರಿ ಪ್ರತಿಗಳು.